ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/06/ಇಸಿಎಸ್(1)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ:23-08-2017

## ಸುತ್ತೋಲೆ

ವಿಷಯ: 2017-18 ನೇ ಸಾಲಿನ ಡಿಪ್ಲೋಮ ವಿದ್ಯಾರ್ಥಿಗಳ ಪ್ರವೇಶ ಪಟ್ಟಿಯನ್ನು ಅಪ್‌ಲೋಡ್ ಮಾಡುವ ಕುರಿತು .

ಉಲ್ಲೇಖ:ಈ ಕಛೇರಿ ಸುತ್ತೋಲೆ ಸಂಖ್ಯೆ:ಬಿಟಿಇ/06/ಇಸಿಎಸ್(1)/2017 ದಿನಾಂಕ:21-08-2017

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2017ರ ನವೆಂಬರ್/ಡಿಸೆಂಬರ್ ಪರೀಕ್ಷೆಯ ಮಾಸ್ಟರ್ ಕ್ಯಾಂಡಿಡೇಟ್ ಲಿಸ್ಟ್ ಅನ್ನು ಆನ್‌ಲೈನ್ ಮೂಲಕ ಇಂದೀಕರಿಸಲು / ನವೀಕರಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ದಿನಾಂಕ:01-09-2017 ರಿಂದ 20-09-2017ರವರೆಗೆ ಕಾಲಾವಕಾಶ ನಿಗದಿ ಪಡಿಸಲಾಗಿರುವುದು ಸರಿಯಷ್ಟೇ. ಸದರಿ ಅವಧಿಯಲ್ಲಿ ಪ್ರಥಮ ಸೆಮಿಸ್ಟರ್‌ಗಳಿಗೆ ಪ್ರವೇಶ ಪಡೆದಿರುವ ಎಲ್ಲಾ ವಿದ್ಯಾರ್ಥಿಗಳ ಪಟ್ಟಿಯನ್ನು ಪ್ರವೇಶಾನುಮೋದನೆಗಾಗಿ ಕಾಯದೆ ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನ New Admissions option ಮೂಲಕ Upload ಮಾಡಲು ಸೂಚಿಸಲಾಗಿದೆ. ತದನಂತರ ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳ ಹೆಸರುಗಳನ್ನು ಕ್ಯಾಂಡಿಡೇಟ್ ಲಿಸ್ಟ್‌ನಿಂದ Delete ಮಾಡತಕ್ಕದ್ದು. ತಪ್ಪಿದ್ದಲ್ಲಿ ತಮ್ಮ ಸಂಸ್ಥೆಯ ಪ್ರಶ್ನೆ ಪತ್ರಿಕೆ ಬೇಡಿಕೆಯನ್ನು ಪೂರೈಸಲು ಸಾಧ್ಯವಿಲ್ಲವೆಂದು ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ:

ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

ಪ್ರತಿ: 1. ಇ ಗವರ್ನೆನ್ಸ್ ವಿಭಾಗಕ್ಕೆ – ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
2. ಕಂಪ್ಯೂಟರ್ ವಿಭಾಗಕ್ಕೆ – ವೆಬ್ ಸೈಟ್‌ನಲ್ಲಿ ಪ್ರಕಟಿಸಲು